## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯ ಸರ್ಕಾರಿ ನೌಕರರಿಗೆ ತಾತ್ಕಾಲಿಕ ಪರಿಹಾರ ಮಂಜೂರಾತಿ.

**ಓದಲಾಗಿದೆ:** ದಿನಾಂಕ: 19.11.2022ರ ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 45 ಎಸ್‌ಆರ್‌ಪಿ 2022.

**ಪ್ರಸ್ತಾವನೆ:**

ಮೇಲೆ ಓದಲಾದ ದಿನಾಂಕ 19.11.2022ರ ಸರ್ಕಾರಿ ಆದೇಶದಲ್ಲಿ ರಾಜ್ಯ ಸರ್ಕಾರಿ ನೌಕರರ ಬೇಡಿಕೆಗಳನ್ನು ಪರಿಶೀಲಿಸಲು 7ನೇ ರಾಜ್ಯ ವೇತನ ಆಯೋಗವನ್ನು ರಚಿಸಿ ಆದೇಶಗಳನ್ನು ಹೊರಡಿಸಲಾಗಿರುತ್ತದೆ. ಪ್ರಸ್ತುತ ರಾಜ್ಯ ಸರ್ಕಾರಿ ನೌಕರರ ಬೇಡಿಕೆಗಳ ಹಿನ್ನೆಲೆಯಲ್ಲಿ, ಸರ್ಕಾರದ ನೀತಿ ನಿರ್ಣಯದಂತೆ 7ನೇ ರಾಜ್ಯ ವೇತನ ಆಯೋಗದ ಅಂತಿಮ ವರದಿಯನ್ನು ಕಾಯ್ದಿರಿಸಿ, ರಾಜ್ಯ ಸರ್ಕಾರಿ ನೌಕರರಿಗೆ, ಸ್ಥಳೀಯ ಸಂಸ್ಥೆಗಳ ಮತ್ತು ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರಿಗೆ ಹಾಗೂ ವಿಶ್ವವಿದ್ಯಾನಿಲಯಗಳ ಬೋಧಕೇತರ ಸಿಬ್ಬಂದಿಗಳಿಗೆ ಮಧ್ಯಂತರ ಪರಿಹಾರವನ್ನು ಮಂಜೂರು ಮಾಡಲು ಸರ್ಕಾರವು ನಿರ್ಧರಿಸಿರುತ್ತದೆ.

ಅದರಂತೆ, ಈ ಕೆಳಕಂಡ ಆದೇಶವನ್ನು ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಇ 07 ಎಸ್‌ಆರ್‌ಪಿ 2023**

**ಬೆಂಗಳೂರು, ದಿನಾಂಕ: 01ನೇ ಮಾರ್ಚ್ 2023**

2018ರ ಪರಿಷ್ಕೃತ ವೇತನ ಶ್ರೇಣಿಗಳಲ್ಲಿ ವೇತನವನ್ನು ಪಡೆಯುತ್ತಿರುವ ರಾಜ್ಯ ಸರ್ಕಾರಿ ನೌಕರರುಗಳಿಗೆ **01ನೇ ಏಪ್ರಿಲ್ 2023** ರಿಂದ ಜಾರಿಗೆ ಬರುವಂತೆ ಮೂಲ ವೇತನದ **ಶೇಕಡ 17 ರಷ್ಟು** ಮಧ್ಯಂತರ ಪರಿಹಾರವನ್ನು ಮಂಜೂರು ಮಾಡಲು ಸರ್ಕಾರವು ಹರ್ಷಿಸುತ್ತದೆ.

2. ಮಧ್ಯಂತರ ಪರಿಹಾರದ ಉದ್ದೇಶಕ್ಕಾಗಿ "**ಮೂಲ ವೇತನ**" ಎಂದರೆ ಸರ್ಕಾರಿ ನೌಕರನು ಧಾರಣ ಮಾಡಿರುವ ಹುದ್ದೆಗೆ ಅನ್ವಯವಾಗುವ ವೇತನ ಶ್ರೇಣಿಯಲ್ಲಿ ಪಡೆಯುತ್ತಿರುವ ವೇತನ ಮತ್ತು ಅದರಲ್ಲಿ,

(ಅ) ವೇತನ ಶ್ರೇಣಿಯ ಗರಿಷ್ಠಕ್ಕಿಂತ ಹೆಚ್ಚಾಗಿ ಅವನಿಗೆ ಸ್ಥಗಿತ ವೇತನ ಬಡ್ತಿಯನ್ನು ನೀಡಲಾಗಿದ್ದರೆ, ಆ ಸ್ಥಗಿತ ವೇತನ ಬಡ್ತಿ,

(ಆ) 2018ರ ಕರ್ನಾಟಕ ನಾಗರಿಕ ಸೇವಾ (ಪರಿಷ್ಕೃತ ವೇತನ) ನಿಯಮಗಳ ನಿಯಮ 3(ಸಿ) ಯನ್ನು ಓದಿಕೊಂಡು 7ನೇ ನಿಯಮದ (3)ನೇ ಉಪನಿಯಮದ ಮೇರೆಗೆ ಅವನಿಗೆ ನೀಡಲಾದ ವೈಯಕ್ತಿಕ ವೇತನ ಯಾವುದಾದರೂ ಇದ್ದರೆ, ಆ ವೈಯಕ್ತಿಕ ವೇತನ,

(ಇ) ವೇತನ ಶ್ರೇಣಿಯ ಗರಿಷ್ಠಕ್ಕಿಂತ ಹೆಚ್ಚಾಗಿ ಅವನಿಗೆ ಮಂಜೂರು ಮಾಡಲಾಗಿರುವ ಹೆಚ್ಚುವರಿ ವೇತನ ಬಡ್ತಿ ಯಾವುದಾದರೂ ಇದ್ದಲ್ಲಿ, ಅವುಗಳು ಸೇರುತ್ತವೆ.

3. ಮೂಲ ವೇತನಕ್ಕೆ ಮೇಲೆ ಸೂಚಿಸಿರುವುದನ್ನು ಹೊರತುಪಡಿಸಿ ಇತರೆ ಯಾವುದೇ ಉಪಲಬ್ಧಗಳನ್ನು ಸೇರಿಸತಕ್ಕದ್ದಲ್ಲ.

4. ರಾಜ್ಯ ಸರ್ಕಾರದ ನಿವೃತ್ತಿ ವೇತನದಾರರು/ಕುಟುಂಬ ನಿವೃತ್ತಿ ವೇತನದಾರರಿಗೆ ಮತ್ತು ರಾಜ್ಯದ ಸಂಚಿತ ನಿಧಿಯಿಂದ ನಿವೃತ್ತಿ ವೇತನ ಮತ್ತು ಕುಟುಂಬ ನಿವೃತ್ತಿ ವೇತನವನ್ನು ಪಡೆಯುತ್ತಿರುವಂತಹ ಅನುದಾನಿತ ಶಿಕ್ಷಣ ಸಂಸ್ಥೆಗಳ ನಿವೃತ್ತಿ ವೇತನದಾರರು/ಕುಟುಂಬ ನಿವೃತ್ತಿ ವೇತನದಾರರಿಗೂ ಸಹ **ದಿನಾಂಕ 1ನೇ ಏಪ್ರಿಲ್ 2023** ರಿಂದ ಜಾರಿಗೆ ಬರುವಂತೆ ಮೂಲ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನದ **ಶೇಕಡ 17 ರಷ್ಟು** ಮಧ್ಯಂತರ ಪರಿಹಾರವನ್ನು ಮಂಜೂರು ಮಾಡಲು ಸಹ ಸರ್ಕಾರವು ಹರ್ಷಿಸುತ್ತದೆ.

5. ಸರ್ಕಾರದ ಸ್ಥಳೀಯ ಸಂಸ್ಥೆಗಳ ನೌಕರರಿಗೆ ಹಾಗೂ ಸರ್ಕಾರದಿಂದ ಸಹಾಯಾನುದಾನ ಪಡೆಯುತ್ತಿರುವ ಶಿಕ್ಷಣ ಸಂಸ್ಥೆಗಳಲ್ಲಿ ಮತ್ತು ವಿಶ್ವವಿದ್ಯಾಲಯಗಳಲ್ಲಿ ಕಾಲಿಕ ವೇತನ ಶ್ರೇಣಿಗಳಲ್ಲಿರುವ ಪೂರ್ಣಾವಧಿ ನೌಕರರುಗಳಿಗೆ ಈ ಆದೇಶವು ಅನ್ವಯಿಸುತ್ತದೆ.

6. ಸ್ಥಳೀಯ ಸಂಸ್ಥೆಗಳ (ನಗರ ಸ್ಥಳೀಯ ಸಂಸ್ಥೆಗಳು ಮತ್ತು ವಿಶ್ವವಿದ್ಯಾಲಯ) ನೌಕರರಿಗೆ ಸೌಲಭ್ಯವನ್ನು ಮಂಜೂರು ಮಾಡುವುದರಿಂದ ಉಂಟಾಗುವ ವೆಚ್ಚವನ್ನು ಅನ್ವಯಿಸುವ ಸ್ಥಳೀಯ ಸಂಸ್ಥೆಗಳೇ ಭರಿಸತಕ್ಕದ್ದು.

7. ಯುಜಿಸಿ/ಎಐಸಿಟಿಇ/ಐಸಿಎಆರ್/ಎನ್‌ಜೆಪಿಸಿ ವೇತನ ಶ್ರೇಣಿಗಳಲ್ಲಿ ಹಾಲಿ ವೇತನ ಪಡೆಯುತ್ತಿರುವ ನೌಕರರಿಗೆ ಮತ್ತು ಎನ್‌ಜೆಪಿಸಿ ಪಿಂಚಣಿದಾರರಿಗೆ ಈ ಆದೇಶವು ಅನ್ವಯಿಸುವುದಿಲ್ಲ.

8. ತಾತ್ಕಾಲಿಕ ಪರಿಹಾರದ ಕಾರಣದಿಂದ ಸಂದಾಯ ಮಾಡಲು ಐವತ್ತು ಪೈಸೆ ಹಾಗೂ ಅದಕ್ಕಿಂತ ಹೆಚ್ಚಿನ ಭಿನ್ನಾಂಶಗಳನ್ನು ಮುಂದಿನ ರೂಪಾಯಿಗೆ ಪೂರ್ಣಾಂಕಗೊಳಿಸತಕ್ಕದ್ದು ಮತ್ತು ಐವತ್ತು ಪೈಸೆಗಿಂತ ಕಡಿಮೆ ಇರುವ ಭಿನ್ನಾಂಕಗಳನ್ನು ಕಡೆಗಣಿಸತಕ್ಕದ್ದು.

ಈ ಆದೇಶದ ಮೂಲಕ ಮಂಜೂರಾದ ತಾತ್ಕಾಲಿಕ ಪರಿಹಾರದ ಮೊತ್ತವು ವಿಶಿಷ್ಠ ಸಂಭಾವನೆಯಾಗಿದ್ದು, ಇದು ನಿವೃತ್ತಿ ಸೌಲಭ್ಯ/ತುಟ್ಟಿ ಭತ್ಯೆಯನ್ನು ನಿರ್ಧರಿಸುವಾಗ ಅಥವಾ ಬೇರೆ ಯಾವುದೇ ಉದ್ದೇಶಗಳಿಗೆ ಪರಿಗಣಿಸತಕ್ಕದ್ದಲ್ಲ.

10. ಈ ತಾತ್ಕಾಲಿಕ ಪರಿಹಾರದ ವೆಚ್ಚವನ್ನು ವೇತನ ವೆಚ್ಚವನ್ನು ಭರಿಸುವ ಲೆಕ್ಕಶೀರ್ಷಿಕೆಯಿಂದಲೇ ಭರಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Jayashree

(ಜಯಶ್ರೀ.ಎಂ.)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಸೇವೆಗಳು-2).

ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಸಂಚಿಕೆಯಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 50 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು.

ಇವರಿಗೆ:

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
2. ಪ್ರಧಾನ ಮಹಾಲೇಖಪಾಲರು (G&SSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398) ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (E&RSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398), ಬೆಂಗಳೂರು.
4. ಪ್ರಧಾನ ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, (ಪಿ.ಬಿ. ನಂ.5329), ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
6. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
7. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
8. ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
9. ಎಲ್ಲಾ ಪ್ರಾದೇಶಿಕ ಆಯುಕ್ತರು.

10. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.

11. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ವಿಧಾನಸೌಧ, ಬೆಂಗಳೂರು.

12. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.

13. ಕರ್ನಾಟಕ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ಉಪ ಕುಲಪತಿಗಳು/ರಿಜಿಸ್ಟ್ರಾರ್‌ಗಳು.

14. ಎಲ್ಲಾ ಜಿಲ್ಲೆಗಳ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು.

15. ಎಲ್ಲಾ ಇಲಾಖಾ ಮುಖ್ಯಸ್ಥರು/ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.

16. ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.

17. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.

18. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು.

19. ಯೋಜನಾ ನಿರ್ದೇಶಕರು, ಹೆಚ್‌ಆರ್‌ಎಂಎಸ್ 2.0, ಆರ್ಥಿಕ ಇಲಾಖೆ, 5ನೇ ಮಹಡಿ, ನ್ಯೂ ಕೆ.ಪಿ.ಸಿ.ಎಲ್. ಗ್ರೀನ್ ಬಿಲ್ಡಿಂಗ್ (ಸಿ.ಐ.ಡಿ. ಕಛೇರಿ ಹತ್ತಿರ), ಅರಮನೆ ರಸ್ತೆ, ಬೆಂಗಳೂರು-560001.

20. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.

21. ಅಧ್ಯಕ್ಷರು, ಕರ್ನಾಟಕ ರಾಜ್ಯ ನಿವೃತ್ತ ನೌಕರರ ಸಂಘ(ರಿ), ಕಬ್ಬನ್ ಉದ್ಯಾನವನ, ಬೆಂಗಳೂರು.

22. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.

23. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.

24. ವಾರಪತ್ರ/ಶಾಖೆಯ ರಕ್ಷಾ ಕಡತ.

**ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಅಧಿಕೃತ ಅಂತರ್ಜಾಲತಾಣ <u>www.finance.karnataka.gov.in</u> ವೀಕ್ಷಿಸಿ.**